All India Radio: Bangalore
Regional Bulletin In Kannada
11.10.2025 /6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮಹಿಳಾ ಕಾರ್ಮಿಕರಿಗೆ ಮುಟ್ಟಿನ ರಜೆ ಶಿಫಾರಸ್ಸು ಹಿನ್ನೆಲೆ ; ವಿವಿಧ ಸಂಘಟನೆ, ಸಂಸ್ಥೆಗಳೊಂದಿಗೆ ಸಚಿವ ಸಂತೋಷ್ ಲಾಡ್ ಚರ್ಚೆ
- ರಾಜ್ಯದಲ್ಲಿ ಸಚಿವ ಸಂಪುಟ ವಿಸ್ತರಣೆ ಇಲ್ಲ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟನೆ
- ದೇಶಾದ್ಯಂತ ವಿವಿಧ ಬ್ಯಾಂಕ್ ಖಾತೆಗಳಿಂದ ೧೫೦ ಕೋಟಿ ರೂಪಾಯಿ ವಂಚನೆ ; ದಾವಣಗೆರೆ ಪೊಲೀಸರಿಂದ ಆರೋಪಿ ಬಂಧನ
- ದ್ವಿದಳ ಧಾನ್ಯ, ಎಣ್ಣೆಬೀಜಗಳ ಉತ್ಪಾದನೆಯಲ್ಲಿ ಸ್ವಾವಲಂಬನೆ ಅಗತ್ಯ - ಸಚಿವೆ ಶೋಭಾ ಕರಂದ್ಲಾಜೆ
- ರಾಜ್ಯದ ಹಲವೆಡೆ ನೈಋತ್ಯ ಮುಂಗಾರು ಸಕ್ರಿಯ ; ಬೆಂಗಳೂರು, ಕರಾವಳಿ ಸೇರಿದಂತೆ ಹಲವೆಡೆ ಮಳೆ ಸಂಭವ

><><><><

ರಾಜ್ಯದಲ್ಲಿನ ಎಲ್ಲಾ ವರ್ಗದ ಮಹಿಳಾ ಕಾರ್ಮಿಕರಿಗೆ ಮುಟ್ಟಿನ ರಜೆ ಶಿಫಾರಸ್ಸು ಮಾಡುವ ಹಿನ್ನೆಲೆಯಲ್ಲಿ ಕಾರ್ಮಿಕ ಸಚಿವ ಸಂತೋಷ್ ಎಸ್. ಲಾಡ್ ಇಂದು ತಮ್ಮ ಗೃಹ ಕಚೇರಿಯಲ್ಲಿ

ಮಹತ್ವದ ಸಭೆ ನಡೆಸಿದ್ದಾರೆ. ಸಭೆಯಲ್ಲಿ ವಿವಿಧ ಕಾರ್ಮಿಕ ಸಂಘಗಳು, ಮಾಲೀಕರು, ಉದ್ಯೋಗಿಗಳು, ಎನ್‌ಜಿಒಗಳಿಂದ ಸಲಹೆ, ಅಭಿಪ್ರಾಯ ಪಡೆಯಲಾಯಿತು. ೭೫ ಅಭಿಪ್ರಾಯಗಳಲ್ಲಿ ೫೬ ಅಭಿಪ್ರಾಯಗಳು ಮುಟ್ಟಿನ ರಜೆಯನ್ನು ಬೆಂಬಲಿಸಿದೆ. ಉಳಿದ ೧೯ ಅಭಿಪ್ರಾಯಗಳು ರಜೆಯನ್ನು ವಿರೋಧಿಸಿದೆ. ಮುಟ್ಟಿನ ರಜೆಯ ಬದಲಿಗೆ ೧೨ ರಜೆಗಳನ್ನು ಮಂಜೂರು ಮಾಡಬಹುದು ಎಂಬುದು ಹೆಚ್ಚಿನ ಪಾಲುದಾರರ ಅಭಿಪ್ರಾಯವಾಗಿದೆ.

><><><><

ನಾಗರಿಕರಿಗೆ ಸ್ಪಂಧಿಸುವ ಉದ್ದೇಶದಿಂದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಲಾಲ್‌ಬಾಗ್‌ನಲ್ಲಿಂದು ಬೆಂಗಳೂರು ನಡಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ ನಾಗರಿಕರ ಸಮಸ್ಯೆ ಹಾಗೂ ಸಲಹೆಗಳನ್ನು ಸ್ವೀಕರಿಸಿ. ಇದೇ ವೇಳೆ ನಾಗರಿಕರು ಸುರಂಗ ರಸ್ತೆ ಯೋಜನೆಯಿಂದ ಲಾಲ್‌ಬಾಗ್‌ಗೆ ತೊಂದರೆಯಾಗದಂತೆ ನೋಡಿಕೊಳ್ಳಿ ಎಂದು ಸಲಹೆ ನೀಡಿದರು. ಬಳಿಕ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಲಾಲ್‌ಬಾಗ್ ಉಳಿವಿಗೆ ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗುವುದು ತಿಳಿಸಿದ್ದಾರೆ. ಸುರಂಗ ಯೋಜನೆಗೆ ೬ ಎಕರೆ ಭೂಮಿ ವಶಪಡಿಸಿಕೊಳ್ಳುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಸಚಿವ ಸಂಪುಟ ವಿಸ್ತರಣೆ ಗಾಳಿ ಸುದ್ದಿಯಾಗಿದ್ದು, ಈ ಕುರಿತಂತೆ ಹೈಕಮಾಂಡ್ ನಿರ್ಧಾರವೇ ಅಂತಿಮ ಎಂದು ತಿಳಿಸಿದ್ದಾರೆ.

><><><><

ದೇಶದ ವಿವಿಧ ಭಾಗಗಳ ಬ್ಯಾಂಕ್ ಖಾತೆಯಿಂದ ೧೫೦ ಕೋಟಿ ರೂಪಾಯಿ ಹಣವನ್ನು ವಂಚಿಸಿದ ಸೈಬರ್ ವಂಚಕನನ್ನು ದಾವಣಗೆರೆ ಪೊಲೀಸರು ಬಂಧಿಸಿದ್ದಾರೆ. ಆರೋಪಿಯ ಮೊಬೈಲ್

ಪರಿಶೀಲನೆ ವೇಳೆ ಜುಲೈ ೨೭ ರಿಂದ ಆಗಸ್ಟ್ ೧೯ರವರೆಗೆ ಸುಮಾರು ೧೫೦ ಕೋಟಿ ರೂಪಾಯಿ ಆನ್‌ಲೈನ್ ವಂಚನೆಯ ಹಣ ಜಮೆಯಾಗಿದೆ. ೧೩೨ ಕೋಟಿ ರೂಪಾಯಿ ಹಣವನ್ನು ಬ್ಯಾಂಕ್‌ನಿಂದ ವಿತ್‌ಡ್ರಾ ಮಾಡಿದ್ದು, ಖಾತೆಯಲ್ಲಿದ್ದ ೧೮ ಕೋಟಿ ರೂಪಾಯಿಗಳನ್ನು ಪೊಲೀಸರು ಸ್ಥಗಿತಗೊಳಿಸಿದ್ದಾರೆ. ಆರೋಪಿ ಸಯ್ಯದ್ ಅರ್ಫಾತ್ ಹಾಸನ ಜಿಲ್ಲೆಯ ಬೇಲೂರಿನವನು ಎಂದು ಪೊಲೀಸರು ತಿಳಿಸಿದ್ದಾರೆ. ತಲೆಮರಿಸಿಕೊಂಡಿರುವ ಇತರೆ ಆರೋಪಿಗಳಿಗಾಗಿ ಶೋಧ ನಡೆಸುತ್ತಿದ್ದಾರೆ. ಪ್ರಕರಣವನ್ನು ಭೇದಿಸಿದ್ದಕ್ಕಾಗಿ ಪೊಲೀಸ್ ತಂಡದ ಪ್ರಯತ್ನಗಳನ್ನು ದಾವಣಗೆರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್ ಶ್ಲಾಘಿಸಿದ್ದಾರೆ.

><><><><><

ಪ್ರಧಾನಮಂತ್ರಿ ಧನ್‌ಧಾನ್ಯ ಕೃಷಿ ಯೋಜನೆ ಮತ್ತು ಬೆಳೆಕಾಳು ಬೆಳೆಗಳಲ್ಲಿ ಆತ್ಮ ನಿರ್ಭರತೆ ಮಿಷನ್ ಯೋಜನೆಯನ್ನು ಬೆಂಗಳೂರಿನ ರಾಷ್ಟ್ರೀಯ ಕೃಷಿಕೀಟ ಸಂಪನ್ಮೂಲಗಳ ವಿಭಾಗದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ದ್ವಿದಳ ಧಾನ್ಯಗಳು ಮತ್ತು ಎಣ್ಣೆಬೀಜಗಳ ಉತ್ಪಾದನೆಯಲ್ಲಿ ಸ್ವಾವಲಂಬನೆಯ ಅಗತ್ಯತೆಯನ್ನು ಪ್ರತಿಪಾದಿಸಿದರು. ಕೇಂದ್ರ ಸರ್ಕಾರವು ದ್ವಿದಳ ಧಾನ್ಯ ಉತ್ಪಾದನೆಯನ್ನು ಪ್ರಸ್ತುತ ೨೪೫ ಲಕ್ಷ ಟನ್‌ಗಳಿಂದ ೩೪೫ ಲಕ್ಷ ಟನ್‌ಗಳಿಗೆ ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾರ್ಯಕ್ರಮದಡಿಯಲ್ಲಿ ರೈತರಿಗೆ ಜೈವಿಕ ನಿಯಂತ್ರಣ ಪರಿಕರಗಳನ್ನು ಸಚಿವೆ ಶೋಭಾ ಕರಂದ್ಲಾಜೆ ವಿತರಿಸಿದರು. ಇನ್ನೊಂದೆಡೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹಾಡೋನಹಳ್ಳಿಯ

ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದಲ್ಲಿ ಪ್ರಧಾನಮಂತ್ರಿ ಧನ್‌ಧಾನ್ಯ ಕೃಷಿ ಯೋಜನೆ ಲೋಕಾರ್ಪಣೆಯ ನೇರಪ್ರಸಾರದ ವೀಕ್ಷಣೆ ಆಯೋಜಿಸಲಾಗಿತ್ತು.

><><><><

ಹಾವೇರಿ, ಬಳ್ಳಾರಿ-ವಿಜಯನಗರ ಜಿಲ್ಲೆಗಳ ಅಚ್ಚುಕಟ್ಟು ಪ್ರದೇಶ ವ್ಯಾಪ್ತಿ ಹೊಂದಿರುವ ವರದಾ ನದಿ ಹಾಗೂ ಧಾರವಾಡ ಉತ್ತರಕನ್ನಡ ಜಿಲ್ಲೆಗಳಲ್ಲಿ ಹರಿಯುವ ಬೇಡ್ತಿ ನದಿ ಜೋಡಣೆಯಿಂದ ಉತ್ತರ ಕನ್ನಡ ಜಿಲ್ಲೆಗೆ ಯಾವುದೇ ತೊಂದರೆಯಾಗುವುದಿಲ್ಲ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಸ್ಪಷ್ಟಪಡಿಸಿದ್ದಾರೆ. ಹಾವೇರಿ ಜಿಲ್ಲೆ ರಾಣೆಬೆನ್ನೂರು ತಾಲೂಕಿನ ಹನುಮನಮಟ್ಟಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಧನ - ಧಾನ್ಯ ಕೃಷಿ ಯೋಜನೆ ಉದ್ಘಾಟನೆ ಕಾರ್ಯಕ್ರಮದಲ್ಲಿ  ಭಾಗವಹಿಸಿ ಮಾತನಾಡಿದ ಅವರು, ರಾಣೆಬೆನ್ನೂರು, ಹಿರೆಕೆರೂರು, ಬ್ಯಾಡಗಿ ಭಾಗದಲ್ಲಿ ತುಂಗಾ ಮೇಲ್ದಂಡೆ ಯೋಜನೆಯನ್ನು ಸಂಪೂರ್ಣವಾಗಿ ಬಳಸಿಕೊಳ್ಳಬೇಕು. ನೀರಾವರಿ ಇಲಾಖೆ ಈ ಯೋಜನೆ ಬಗ್ಗೆ ಮುತುವರ್ಜಿ ವಹಿಸಬೇಕು ಎಂದು ಹೇಳಿದ್ದಾರೆ.

><><><><

ಗದಗ ಜಿಲ್ಲೆಯನ್ನು ಮಾದಕ ವ್ಯಸನಮುಕ್ತ ಮಾಡಲು ಪಣ ತೊಡಬೇಕು ಎಂದು ಜಿಲ್ಲಾ ಉಸ್ತುವಾರಿ ಎಚ್.ಕೆ.ಪಾಟೀಲ್ ಕರೆ ನೀಡಿದ್ದಾರೆ. ಗದಗ ಜಿಲ್ಲೆಯ ಮೆಡಿಕಲ್, ಫಾರ್ಮಸಿ, ನರ್ಸಿಂಗ್, ಆಯುರ್ವೇದ ಸಂಸ್ಥೆಗಳ ಸಹಯೋಗದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಅಂಗಾಂಗದಾನ ಮತ್ತು ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ ನಡೆದ ವಾಕಥಾನ್‌ಗೆ ಅವರು ಚಾಲನೆ ನೀಡಿದರು. ಶೇಕಡ ೧೦ರಷ್ಟು ಯುವ ಜನಾಂಗ ನಶೆಯ ಕಪಿಮುಷ್ಟಿಯಲ್ಲಿ ಸಿಲುಕಿರುವುದು

ಕಳವಳಕಾರಿಯಾಗಿದೆ.  ಶಿಕ್ಷಣ ಸಂಸ್ಥೆಗಳು, ಕುಟುಂಬಗಳು, ಶಿಕ್ಷಕರು, ಪೋಷಕರು ಹಾಗೂ ವಿದ್ಯಾರ್ಥಿಗಳು ಇದರ ವಿರುದ್ಧ ಹೋರಾಡಬೇಕಿದೆ ಎಂದು ತಿಳಿಸಿದ್ದಾರೆ.

><><><><

ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಹಲವೆಡೆ ಭಾರೀ ಮಳೆಯಾಗುತ್ತಿದೆ. ಬೆಳಗ್ಗಿನಿಂದಲೇ ಗುಡುಗು  ಮಿಂಚು ಸಹಿತ ಮಳೆಯಾಗುತ್ತಿದ್ದು, ಸಾಮಾನ್ಯ ಜನಜೀವನ ವ್ಯತ್ಯಯವಾಗಿದೆ. ಮೇ ತಿಂಗಳ ಅಂತ್ಯದಲ್ಲಿ ಪ್ರಾರಂಭವಾದ ಮಳೆ ಕೊಡಗಿನಲ್ಲಿ ಇನ್ನೂ ಮುಂದುವರೆದಿರುವುದು ರೈತರ ಚಿಂತೆಗೆ ಕಾರಣವಾಗಿದೆ. ಮಳೆಯಿಂದಾಗಿ ಕಾಫಿ ಫಸಲಿಗೂ ಹಾನಿಯಾಗಿದೆ. ಪ್ರವಾಸೋದ್ಯಮಕ್ಕೂ ನಷ್ಟ ಉಂಟಾಗಿದೆ.

><><><><

ಜನಪ್ರಿಯ ಜಾನಪದ ಕ್ರೀಡೆ, ಕಂಬಳ ನಡೆಸಲು ಬಜೆಟ್‌ನಲ್ಲಿ ೨ ಕೋಟಿ ರೂಪಾಯಿ ಮೊತ್ತ ಮೀಸಲಿರಿಸುವಂತೆ ರಾಜ್ಯ ಕಂಬಳ ಅಸೋಸಿಯೇಷನ್ ಸರ್ಕಾರಕ್ಕೆ ಮನವಿ ಮಾಡಿದೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅಸೋಸಿಯೇಷನ್ ಅಧ್ಯಕ್ಷ ದೇವೀಪ್ರಸಾದ್ ಶೆಟ್ಟಿ ಬೆಳಪು, ಬಜೆಟ್‌ನಲ್ಲಿ ಈ ಮೊತ್ತ ಮೀಸಲಿರಿಸಿ ಆಯೋಜಕರಿಗೆ ಒದಗಿಸಿದರೆ ಪೂರಕ ಯೋಜನೆ ರೂಪಿಸಲು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ. ಕಂಬಳಕ್ಕೆ ೨ ಕೋಟಿ ರೂಪಾಯಿ ಮೀಸಲಿರಿಸಿದರೆ ಒಂದು ಕಂಬಳಕ್ಕೆ ತಲಾ ೮ ಲಕ್ಷ ರೂಪಾಯಿಯಂತೆ ೨೫ ಕಂಬಳಗಳಿಗೆ ಅನುದಾನ ನೀಡಲು ಸಾಧ್ಯವಾಗಲಿದೆ. ಈ ಬಗ್ಗೆ ಪುತ್ತೂರು ಶಾಸಕ ಅಶೋಕ್ ರೈ ನೇತೃತ್ವದಲ್ಲಿ ಮತ್ತೊಮ್ಮೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ.

><><><><

ಕರ್ನಾಟಕ ಶಾಸ್ತ್ರೀಯ ಸಂಗೀತದ ದಾಸ ಪರಂಪರೆಗೆ ದೊಡ್ಡ ಇತಿಹಾಸವಿದ್ದು ನಾವುಗಳು ಅದನ್ನು ರಕ್ಷಿಸಿ ಮುಂದುವರಿಸುವ ಕೆಲಸ ಮಾಡಬೇಕು ಎಂದು ಮೈಸೂರು ಕೊಡಗು ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ. ಮೈಸೂರು ವಿಶ್ವವಿದ್ಯಾನಿಲಯದಲ್ಲಿಂದು ಪ್ರವಾಸೋದ್ಯಮ ಇಲಾಖೆ ಆಯೋಜಿಸಿದ್ದ ಮೈಸೂರು ಸಂಗೀತ ಸುಗಂಧ ೨೦೨೫ರ ಕರ್ನಾಟಕ ಶಾಸ್ತ್ರೀಯ ಸಂಗೀತದ ದಾಸ ಪರಂಪರೆಯ ಸಂಗೀತೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು, ಮೈಸೂರಿನ ಗುರುತು ಇರುವುದೇ ಸಂಗೀತದ ಕಲೆಯಿಂದ, ಸಂಗೀತವು ಮೈಸೂರಿನ ಕಲೆ ಸಂಸ್ಕೃತಿಯನ್ನು ಸಾರುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಹೇಳಿದ್ದಾರೆ. ದಾಸ ಪರಂಪರೆ ಭಾರತದ ಸಂಗೀತದಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದು, ತ್ಯಾಗರಾಜರು, ಪುರಂದರ ದಾಸರ ಪ್ರತಿಮೆಗಳನ್ನು ಅಯೋಧ್ಯೆಯಲ್ಲಿ ಪ್ರತಿಷ್ಠಾಪಿಸಲಾಗಿದೆ. ಇದು ಭಾರತದ ಸಂಗೀತದಲ್ಲಿ ದಾಸ ಪರಂಪರೆಯ ವಹತ್ತರ ಪಾತ್ರ ತಿಳಿಸುತ್ತದೆ ಎಂದಿದ್ದಾರೆ.

><><><><><

ಮತಗಳ್ಳತನದ ವಿರುದ್ಧ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನಡೆಸುತ್ತಿರುವ ಅಭಿಯಾನದ ಅಂಗವಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲೂ ಸಹಿ ಸಂಗ್ರಹ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜಾ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಕ್ಷಿಣ ಕನ್ನಡ ಜಿಲ್ಲೆಯ ೧ ಸಾವಿರದ ೮೬೨ ಬೂತ್‌ಗಳಲ್ಲಿ ಕನಿಷ್ಠ ಬೂತ್‌ಗೆ ೧೦೦ರಂತೆ ಸಹಿ ಸಂಗ್ರಹ ಮಾಡಲು ತೀರ್ಮಾನಿಸಲಾಗಿದೆ.

ಜಿಲ್ಲೆಯಲ್ಲಿ ೧೮ ಸಾವಿರ ಸಹಿ ಸಂಗ್ರಹದ ಗುರಿ ಇರಿಸಲಾಗಿದ್ದು, ಇದೇ ೧೩ ಮತ್ತು ೧೪ರಂದು ಸಹಿ ಸಂಗ್ರಹ ಅಭಿಯಾನ ನಡೆಸಲಾಗುವುದು ಎಂದು ಹೇಳಿದ್ದಾರೆ.

><><><><

ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಮಾಹಿತಿ ಸಂಗ್ರಹಿಸಲು ನಡೆಸಲಾಗುತ್ತಿರುವ ಸಮೀಕ್ಷೆ ಕಾರ್ಯದಲ್ಲಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಇವರೆಗೆ ೩ ಲಕ್ಷ ೨೩ ಸಾವಿರದ ೫೫೧ ಮನೆಗಳ ಸಮೀಕ್ಷೆಯನ್ನು ಪೂರ್ಣಗೊಳಿಸಲಾಗಿದೆ. ಸಮೀಕ್ಷೆ ಕಾರ್ಯದಲ್ಲಿ ಜಿಲ್ಲೆಯಲ್ಲಿ ಇದುವರೆಗೂ ಶೇಕಡ ೯೭.೮೨ ರಷ್ಟು ಸಾಧನೆ ಮಾಡಲಾಗಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

><><><><

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಮಧುರನಹೊಸಹಳ್ಳಿ ಗ್ರಾಮದಲ್ಲಿ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಜಲಾನಯನ ಅಭಿವೃದ್ಧಿ ಘಟಕ ಯೋಜನೆಯಡಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಗ್ರಾಮದಲ್ಲಿ ಬೀದಿ ನಾಟಕ ಹಾಗೂ ಜಾಥಾದ ಮೂಲಕ ಯೋಜನೆಯ ಬಗ್ಗೆ ಅರಿವು ಮೂಡಿಸಲಾಯಿತು.

><><><><

ಇನ್ನು ಹವಾವರ್ತಮಾನ,

ನೈಋತ್ಯ ಮುಂಗಾರು ದಕ್ಷಿಣ ಕರ್ನಾಟಕದಲ್ಲಿ ಸಕ್ರಿಯಾಗಿದೆ. ಕರಾವಳಿ ಕರ್ನಾಟಕದಲ್ಲಿ ದುರ್ಬಲವಾಗಿದೆ. ಕೋಲಾರದಲ್ಲಿ ೯, ಬೆಂಗಳೂರು ನಗರದಲ್ಲಿ ೭ ಸೆಂಟಿ ಮೀಟರ್ ಮಳೆಯಾಗಿದೆ. ಇಂದು ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ.

ಉತ್ತರ ಒಳನಾಡಿನ ಹಾವೇರಿ ಮತ್ತು ಗದಗ ಜಿಲ್ಲೆಯ ಒಂದೆರಡು ಕಡೆ ಗುಡುಗು ಸಹಿತ ಮಳೆಯಾಗಲಿದೆ. ಕೊಡಗು, ಮಂಡ್ಯ, ಹಾಸನ, ರಾಮನಗರ, ಬೆಂಗಳೂರುನಗರದ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

><><>END<><><